ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	452(529)
ಮಾನ್ಯ ಸದಸ್ಯರ ಹೆಸರು:	ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ:	09.03.2020
ಉತ್ತರಿಸುವ ಸಚಿವರು:	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಬೀದರ ಜಿಲ್ಲೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ರೋಗಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;	ಬಂದಿದೆ <u>ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ ಕ್ರಮಗಳು:-</u> ಪ್ರಸ್ತುತ ಇರುವ ವೈದ್ಯರುಗಳಿಂದ ರೋಗಿಗಳಿಗೆ ಯಾವುದೇ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ. 1. ತಜ್ಞ ವೈದ್ಯರನ್ನು "On Call Basis" ಮೇಲೆ ತೆಗೆದುಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ:ಆಕುಕ 178 ಹೆಚ್‌ಎಸ್‌ಹೆಚ್ 2011, ದಿನಾಂಕ: 20-05-2016ರಲ್ಲಿ ಆಯಾ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು ಜಿಲ್ಲಾಧಿಕಾರಿಗಳ ಸಹಮತಿ ಪಡೆದು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. 2. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಸರ್ಕಾರಿ ಆದೇಶ ಸಂಖ್ಯೆ: ಆಕುಕ 297 ಹೆಚ್‌ಎಸ್‌ಹೆಚ್ 2015, ದಿನಾಂಕ:22-04-2016 ಹಾಗೂ ಆಕುಕ 359 ಹೆಚ್‌ಎಸ್‌ಹೆಚ್ 2016, ದಿನಾಂಕ:01-08-2016ರಲ್ಲಿ ಅನುಮತಿ ನೀಡಲಾಗಿದೆ. 3. ಎಂಬಿಬಿಎಸ್ ಪದವಿ ಹೊಂದಿದ ವೈದ್ಯ ಅಭ್ಯರ್ಥಿಗಳು ಲಭ್ಯವಿಲ್ಲದೆ ಇದ್ದ ಪಕ್ಷದಲ್ಲಿ ಸದರಿ ಹುದ್ದೆಯ ಎದುರು ಗುತ್ತಿಗೆ ಆಯುಷ್ ವೈದ್ಯರನ್ನು ಆಯಾ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು ಜಿಲ್ಲಾಧಿಕಾರಿಗಳ ಸಹಮತಿ ಪಡೆದು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. 4. ಹಾಗೆಯೇ ಖಾಲಿ ಇರುವ ತಜ್ಞರು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹಾಗೂ ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ನಿಯಮ-2019ರ ಮೂಲಕ ಭರ್ತಿ ಮಾಡಲು ದಿನಾಂಕ: 06-02-2020ರ ಕರ್ನಾಟಕ ರಾಜ್ಯ ಪತ್ರದಲ್ಲಿ ಕರಡು ನಿಯಮಗಳನ್ನು ಪ್ರಕಟಿಸಿದ್ದು, ಅಂತಿಮ ನಿಯಮಗಳನ್ನು ಹೊರಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ.

ಆ	ಬೀದರ್ ಜಿಲ್ಲೆಯಲ್ಲಿ ಕಳೆದ ವರ್ಷ ಡೆಂಗ್ಯೂ, ಚಿಕನ್ ಗುನ್ಯ ಪ್ರಕರಣಗಳು ಅಧಿಕ ಸಂಖ್ಯೆಯಲ್ಲಿ ವರದಿಯಾಗಿದ್ದು, ಇದರಿಂದ ಸಾವನ್ನಪ್ಪಿದ ಪ್ರಕರಣಗಳು ಎಷ್ಟು (ತಾಲ್ಲೂಕುವಾರು ವಿವರ ನೀಡುವುದು)	2019ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಡೆಂಗ್ಯೂ, ಚಿಕನ್ ಗುನ್ಯ ಜ್ವರದಿಂದ ಮರಣ ಸಂಭವಿಸಿದ ಯಾವುದೆ ಪ್ರಕರಣಗಳು ಇರುವುದಿಲ್ಲ

ಸಂ: ಆಕುಕ 05 ಹೆಚ್ ಎಸ್ ಡಿ 2020

[ಬಿ. ಶ್ರೀರಾಮುಲು]
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.